ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು-1

**ಸಂಖ್ಯೆ: ಸಿ1(7)ಆ.ಋ.ಪ.147/2009-10** **ದಿನಾಂಕ:10-01-2017**

ಉಪನಿರ್ದೇಶಕರು[ಆಡಳಿತ],
ಸಾರ್ವಜನಿಕ ಶಿಕ್ಷಣ ಇಲಾಖೆ,
---------------ಜಿಲ್ಲೆ.
---------------

**ಮಾನ್ಯರೇ,**

**ವಿಷಯ:** ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗಳ ವ್ಯಾಪ್ತಿಯ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳ ಆಸ್ತಿ ಮತ್ತು ಹೊಣೆಗಾರಿಕೆ ವರದಿಗಳನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವ ಬಗ್ಗೆ.

**ಉಲ್ಲೇಖ:**1].ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/ಸೇನಿಸಿ-92 ದಿನಾಂಕ:26-04-94.
2].ಸರ್ಕಾರದ ಸುತ್ತೋಲೆ ಸಂಖ್ಯೆ: ಇ.ಡಿ 62 ಎ.ಇ.ಎ.ಆರ್ 2002 ದಿನಾಂಕ:22-7-2002.
3].ಈ ಕಛೇರಿಯ ಸುತ್ತೋಲೆ ಸಂಖ್ಯೆ: ಸಿ1(7)ಆ.ಋ.ಪ.147/2009-10 ದಿನಾಂಕ: 21-11-2002, 30-10-2003, 30-03-2004, 10-05-2007 26-04-2008, 06-08-2008. 02-08-2011, ಮತ್ತು ದಿನಾಂಕ:03-04-2014.

-&&&&-

ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966ರ ಉಪ ನಿಯಮ 22ರ ಪ್ರಕಾರ ಎಲ್ಲಾ ಸರ್ಕಾರಿ ನೌಕರರು ಮೊದಲು ಸೇವೆಗೆ ಸೇರಿದಾಗ ಮತ್ತು ಪ್ರತಿ ವರ್ಷ ಮಾರ್ಚ್ 31ರಲ್ಲಿದ್ದಂತೆ ಕಾರ್ಯನಿರ್ವಹಣಾ ವರದಿ ಹಾಗೂ ಅಧಿಕಾರಿಗಳ ಮತ್ತು ಕುಟುಂಬದ ಸದಸ್ಯರ ಹೆಸರಿನಲ್ಲಿರುವ ಚರ ಸ್ಥಿರಾಸ್ತಿಗಳ ವಿವರಗಳನ್ನು ನಿಗಧಿತ ನಮೂನೆಯಲ್ಲಿ ನಮೂದಿಸಿ ಸಂಬಂಧಿಸಿದ ಪ್ರಾಧಿಕಾರಿಗಳಿಗೆ ಸಲ್ಲಿಸುವುದು ಕಡ್ಡಾಯವಾಗಿದೆ.

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಅಧಿಕಾರಿಗಳು ಪ್ರತಿ ವರ್ಷ ಏಪ್ರಿಲ್ 30ರೊಳಗಾಗಿ ನಿಗಧಿತ ನಮೂನೆಯಲ್ಲಿ ಪೂರ್ಣವಾದ ಮಾಹಿತಿಗಳನ್ನು ಭರ್ತಿ ಮಾಡಿ ಪೂರಕ ದಾಖಲೆಗಳ ಪ್ರತಿಗಳೊಂದಿಗೆ ಆಸ್ತಿ-ಋಣ ಪಟ್ಟಿಯನ್ನು ಸಲ್ಲಿಸುವ ಬಗ್ಗೆ ಮಾರ್ಗಸೂಚಿಯನ್ನು ಉಲ್ಲೇಖ (3) ರಲ್ಲಿರುವಂತೆ ವಿವಿಧ ದಿನಾಂಕಗಳ ಸುತ್ತೋಲೆಗಳಲ್ಲಿ ಈಗಾಗಲೇ ತಿಳಿಸಲಾಗಿದೆ.

ಆದರೂ ಸಹ, ಕೆಲವು ಅಧಿಕಾರಿಗಳು ನಿಗಧಿತ ದಿನಾಂಕದೊಳಗಾಗಿ ತಮ್ಮ ಆಸ್ತಿ ಋಣಪಟ್ಟಿಯನ್ನು ಸಲ್ಲಿಸದೇ ಇರುವುದು ಮತ್ತು ಅಪೂರ್ಣವಾದ ಮಾಹಿತಿಗಳನ್ನು ಸಲ್ಲಿಸುತ್ತಿರುವುದನ್ನು ತೀವ್ರವಾಗಿ ಪರಿಗಣಿಸಿದೆ.

ಈಗಾಗಲೇ ಉಲ್ಲೇಖಿತ ಈ ಕಛೇರಿಯ ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಈ ಇಲಾಖೆಯ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಈ ಕೆಳಗೆ ವಿವರಿಸಿರುವಂತೆ ಸಕ್ಷಮ ಪ್ರಾಧಿಕಾರಕ್ಕೆ ದಿನಾಂಕ:31-03-2016ಕ್ಕೆ ಇದ್ದಂತೆ ಆಸ್ತಿ-ಋಣ ಪಟ್ಟಿಯನ್ನು ದಿನಾಂಕ:23-01-2017 ರೊಳಗೆ ಪೂರಕ ದಾಖಲೆಗಳೊಂದಿಗೆ ಮತ್ತು ಈ ಸಾಲಿನಲ್ಲಿ ಪಡೆಯಲಾದ ವೇತನ ವಿವರಗಳು, ಕಡಿತ, ವರಮಾನ ತೆರಿಗೆ, ಇತ್ಯಾದಿ ವಿವರಗಳನ್ನು ತೋರಿಸುವ ತಃಖ್ತೆಯೊಂದಿಗೆ ಸಲ್ಲಿಸುವಂತೆ ಸೂಚಿಸಿದೆ.

| ಕ್ರ.ಸ | ಅಧಿಕಾರಿಗಳ ವೃಂದ | ಆಸ್ತಿ ಋಣ ತಃಖ್ತೆಗಳನ್ನು ಸಲ್ಲಿಸಬೇಕಾದ ಪ್ರಾಧಿಕಾರ |
|---|---|---|
| ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು | | |
| 1]. | ಬೆಂಗಳೂರು ವಿಭಾಗದ ಅಧಿಕಾರಿಗಳು | ಜಂಟಿ ನಿರ್ದೇಶಕರು[ಆಡಳಿತ], ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು. |
| 2]. | ಮೈಸೂರು ವಿಭಾಗದ ಅಧಿಕಾರಿಗಳು | ಸಹ ನಿರ್ದೇಶಕರು, ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು. |

ಮೇಲೆ ತಿಳಿಸಿರುವಂತೆ ಆಸ್ತಿ ಮತ್ತು ಋಣ ಪಟ್ಟಿಗಳಲ್ಲಿನ ನಮೂನೆಯಲ್ಲಿನ ಎಲ್ಲಾ ಅಂಶಗಳನ್ನೂ ಒಳಗೊಂಡಂತೆ ಸೂಕ್ತ ರೀತಿಯಲ್ಲಿ ಭರ್ತಿ ಮಾಡಿ, ದೃಢಿಕರಿಸಿ ಪ್ರತಿ ವರ್ಷ ಏಪ್ರಿಲ್ 30ರೊಳಗೆ ತಪ್ಪದೇ ಸಂಬಂಧಪಟ್ಟ ಪ್ರಾಧಿಕಾರಕ್ಕೆ ಸಲ್ಲಿಸುವಂತೆ

ಸೂಚಿಸಿದೆ. ಒಂದು ವೇಳೆ ನಿಗಧಿತ ಅವಧಿಯೊಳಗೆ ಸಲ್ಲಿಸದಿದ್ದಲ್ಲಿ ಅಥವಾ ಅಪೂರ್ಣವಾದ ಮಾಹಿತಿಗಳನ್ನು ಒದಗಿಸಿದಲ್ಲಿ ಅಂತಹ ಅಧಿಕಾರಿಗಳ ಮೇಲೆ ಕರ್ನಾಟಕ ನಾಗರೀಕ ಸೇವಾ ನಿಯಮ (ನಡತೆ) 1966ನ್ನು ಉಲ್ಲಂಘಿಸಿರುವರೆಂದು ಭಾವಿಸಿ ನಿಯಮಾನುಸಾರ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ಎಂದು ಮತ್ತೊಮ್ಮೆ ಸ್ಪಷ್ಟವಾಗಿ ತಿಳಿಸಿದೆ.

ಜಿಲ್ಲಾ ಉಪನಿರ್ದೇಶಕರು[ಆಡಳಿತ]-ರವರು ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ಗ್ರೂಪ್-ಬಿ ವೃಂದದ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಆಸ್ತಿ-ಋಣ ಪಟ್ಟಿಗಳನ್ನು ಪಡೆದು ಕ್ರೋಢಿಕರಿಸಿ ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

[ಎಸ್.ಕಾತ್ಯಾಯನಿ ದೇವಿ]
ಜಂಟಿ ನಿರ್ದೇಶಕರು[ಆಡಳಿತ]

11.1.12 11.1.12 11.1.12

**ಇವರಿಗೆ:**

1. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ರವರುಗಳಿಗೆ ಅಗತ್ಯ ಕ್ರಮಕ್ಕಾಗಿ
2. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹ ನಿರ್ದೇಶಕರು ಹಾಗೂ ಸಿ.ಟಿ.ಇ.ಗಳಲ್ಲಿನ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು(ಆಡಳಿತ) *ಅಗತ್ಯ ಕ್ರಮಕ್ಕಾಗಿ.*
4. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಮಾಹಿತಿಯನ್ನು ಕ್ರೂಢೀಕರಿಸಿ ಉಪನಿರ್ದೇಶಕರಿಗೆ ಸಲ್ಲಿಸಲು ತಿಳಿಸಿದೆ.
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಡಯಟ್ ಪ್ರಾಂಶುಪಾಲರಿಗೆ ತಮ್ಮ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಮೇಲ್ಕಂಡ ಮಾಹಿತಿಯನ್ನು ನಿರ್ದೇಶಕರು, ಡಿ.ಎಸ್.ಇ.ಆರ್.ಟಿ-ರವರ ಮೂಲಕ ಸಲ್ಲಿಸಲು ತಿಳಿಸಿದೆ.
6. ಕಛೇರಿ ಪ್ರತಿ.